For more job news visit : www.kpscvaani.com

ಅಂಗನವಾಡಿ ಹುದ್ದೆಗಳ ಭರ್ತಿಗಾಗಿ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ: ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಹುದ್ದೆಗಳನ್ನು ಗೌರವ ಸೇವೆಯ ಆಧಾರದ ಮೇಲೆ ಭರ್ತಿ ಮಾಡಲು ಸ್ಥಳೀಯ ಅರ್ಹ ಮಹಿಳಾ ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸ್ಥಳೀಯ ಅರ್ಹ ಮಹಿಳಾ ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಎಲ್ಲ ಹಂತಗಳನ್ನು ಪೂರ್ಣಗೊಳಿಸಿ ಅರ್ಜಿಗಳನ್ನು ಸೆಪ್ಟೆಂಬರ್30 ರೊಳಗೆ ಸಲ್ಲಿಸಬೇಕು. ಖಾಲಿ ಹುದ್ದೆಗಳ ವಿವರ, ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ ಇತ್ಯಾದಿ ಹೆಚ್ಚಿನ ವಿವರಗಳನ್ನು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಹಾಗೂ ಸಂಬಂಧಪಟ್ಟ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಆರ್. ವೆಂಕಟೇಶರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.